# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ಹೆಚ್.ಎಸ್‌ಚಿನ್ನಸ್ವಾಮಿ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ (ಗ್ರೇಡ್-1), ಹಿಂದಿನ ಎನ್.ಬೇಗೂರು ಗ್ರಾಮ ಪಂಚಾಯಿತಿ, ಹಾಲಿ ಕಂಚಮಳ್ಳಿ ಗ್ರಾಮಪಂಚಾಯಿತಿ, ಹೆಚ್.ಡಿ.ಕೋಟೆ ತಾಲ್ಲೂಕು, ಮೈಸೂರು ಜಿಲ್ಲೆ ಇವರು ಸಲ್ಲಿಸಿರುವ ಮೇಲ್ಮನವಿಯ ಬಗ್ಗೆ ಆದೇಶ.

ಓದಲಾಗಿದೆ:

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು ಜಿಲ್ಲೆ ರವರ ಆದೇಶ ಸಂಖ್ಯೆ:ಸಿ.ಸಿ.ಎ/01/2014-15, ದಿನಾಂಕ:05-07-2017.
2. ಶ್ರೀ ಚಿನ್ನಸ್ವಾಮಿ.ಹೆಚ್.ಎಸ್, ಗ್ರಾಮ ಪಂಚಾಯಿತಿ ಕಾರ್ಯದರ್ಶಿ(ಗ್ರೇಡ್-1), ಇವರು ಸರ್ಕಾರಕ್ಕೆ ಸಲ್ಲಿಸಿರುವ ಮೇಲ್ಮನವಿ ದಿನಾಂಕ:27/09/2017.
3. ಸರ್ಕಾರದಿಂದ ವಿಚಾರಣೆಗೆ ಹಾಜರಾಗಲು ನೀಡಿದ ತಿಳುವಳಿಕೆ ಪತ್ರ ದಿನಾಂಕ:15-12-2017, 20-03-2018 ಹಾಗೂ 30-04-2018.

ಪ್ರಸ್ತಾವನೆ :

ಶ್ರೀ ಹೆಚ್.ಎಸ್‌ಚಿನ್ನಸ್ವಾಮಿ, ಹಿಂದಿನ ಎನ್.ಬೇಗೂರು ಗ್ರಾಮ ಪಂಚಾಯಿತಿ ಕಾರ್ಯದರ್ಶಿ(ಹಾಲಿ ಪ್ರಭಾರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕಂಚಮಳ್ಳಿ ಗ್ರಾಮ ಪಂಚಾಯಿತಿ, ಹೆಚ್.ಡಿ.ಕೋಟೆ ತಾಲ್ಲೂಕು, ಇವರು ದಿನಾಂಕ:31.08.2010 ರಿಂದ 11.08.2011ರವರೆಗೆ ಎನ್.ಬೇಗೂರು ಗ್ರಾಮ ಪಂಚಾಯಿತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ವಿವಿಧ ವಸತಿ ಯೋಜನೆಯಡಿ ಮಂಜೂರಾದ ಫಲಾನುಭವಿಗಳಿಗೆ, ಫಲಾನಿಭವಿಗಳು ಮನೆಗಳನ್ನು ನಿರ್ಮಾಣ ಮಾಡದಿದ್ದರೂ, ಮನೆ ನಿರ್ಮಾಣ ಮಾಡಿರುವುದಾಗಿ ಹಾಗೂ ಫಲಾನುಭವಿಗಳು ಈಗಾಗಲೇ ನಿರ್ಮಿಸಿದ್ದ ಹಳೆಯ ಮನೆಗಳಿಗೆ ನಿಯಮಬಾಹಿರವಾಗಿ ರೂ.1,77,000/-(ಒಂದು ಲಕ್ಷದ ಎಪ್ಪತ್ತೇಳು ಸಾವಿರ ರೂ.ಗಳು ಮಾತ್ರ)ಗಳನ್ನು ಪಾವತಿಸುವ ಮೂಲಕ ಹಣ ದುರುಪಯೋಗಪಡಿಸಿಕೊಂಡಿರುತ್ತಾರೆ ಎಂಬ ಆರೋಪದ ಮೇಲೆ ಸದರಿ ನೌಕರರ ವಿರುದ್ಧ ವಿಚಾರಣೆ ನಡೆಸಲು ಶ್ರೀ ಎನ್.ನಾರಾಯಣ, ನಿವೃತ್ತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಗಿತ್ತು. ವಿಚಾರಣಾಧಿಕಾರಿಗಳು ದಿನಾಂಕ:29.9.2016ರಂದು ಸಲ್ಲಿಸಿದ ವಿಚಾರಣಾ ವರದಿಯಲ್ಲಿ ನೌಕರರ ವಿರುದ್ಧದ ಆರೋಪ ಸಾಬೀತಾಗಿರುತ್ತದೆ ಎಂದು ವರದಿ ನೀಡಿದ್ದರು. ಆಪಾದಿತ ನೌಕರರು 2ನೇ ಕಾರಣಕೇಳುವ ನೋಟೀಸಿಗೆ ಸಲ್ಲಿಸಿರುವ ಲಿಖಿತ ಸಮಜಾಯಿಷಿಯನ್ನು ಸಮರ್ಥಿಸಿರುವ ಯಾವುದೇ ದಸ್ತಾವೇಜು ಸಾಕ್ಷ್ಯಗಳನ್ನು ಸಲ್ಲಿಸಿರುವುದಿಲ್ಲ. ಆಪಾದಿತ ನೌಕರರ ವಿರುದ್ಧದ ಆರೋಪಗಳು ಸಾಬೀತಾಗಿರುವ ಹಿನ್ನೆಲೆಯಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು ಇವರು ಮೇಲೆ ಓದಲಾದ (1)ರ ಆದೇಶದಲ್ಲಿ ಸದರಿ ನೌಕರರಿಗೆ ಮಂಜೂರಾಗಬೇಕಿದ್ದ ನಾಲ್ಕು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತಪರಿಣಾಮಸಹಿತವಾಗಿ ತಡೆಹಿಡಿದು ಆದೇಶಿಸಿರುತ್ತಾರೆ ಹಾಗೂ ವಸತಿ ಯೋಜನೆಯಲ್ಲಿ ನಿಯಮಬಾಹಿರವಾಗಿ ಪಾವತಿಸಲಾದ ಮೊಬಲಗು ರೂ.177,000/-ಗಳನ್ನು ಶೇ.15ರ ಬಡ್ಡಿ ರೂ.9,05,382/-ಗಳನ್ನು ಸೇರಿಸಿದ ಒಟ್ಟು ಮೊಬಲಗು ರೂ.10,82,382/-ಗಳನ್ನು 108 ಸಮ ಕಂತುಗಳಲ್ಲಿ ವಸೂಲು ಮಾಡಲು ಹಾಗೂ ಸಂಬಂಧಪಟ್ಟ ಲೆಕ್ಕಶೀರ್ಷಿಕೆಗೆ ಜಮೆ ಮಾಡಲು ಆದೇಶಿಸಿದ್ದರು.

ಮೇಲೆ ಓದಲಾದ (1)ರ ಆದೇಶದ ವಿರುದ್ಧ ಶ್ರೀ ಚಿನ್ನಸ್ವಾಮಿ.ಹೆಚ್.ಎಸ್, ಗ್ರಾಮ ಪಂಚಾಯಿತಿ ಕಾರ್ಯದರ್ಶಿ(ಗ್ರೇಡ್-1), ಇವರು ಸರ್ಕಾರಕ್ಕೆ ಮೇಲೆ ಓದಲಾದ (2)ರಲ್ಲಿ ಮೇಲ್ಮನವಿಯನ್ನು ಸಲ್ಲಿಸಿರುತ್ತಾರೆ. ಸದರಿ ಮೇಲ್ಮನವಿಯಲ್ಲಿ ಸಲ್ಲಿಸಿರುವ ಲಿಖಿತ ಹೇಳಿಕೆಯ ಪ್ರಮುಖ ಅಂಶಗಳು ಈ ಕೆಳಕಂಡಂತಿವೆ:-

- ಪ್ರತಿಯೊಬ್ಬ ಫಲಾನುಭವಿಗಳ "ಬ್ಯಾಂಕ್ ಖಾತೆಗೆ ಅನುದಾನವನ್ನು ನೇರವಾಗಿ ಜಮೆ ಮಾಡಲಾಗಿದೆ. ಇದಕ್ಕೆ ಪೂರಕ ದಾಖಲೆಗಳನ್ನು ಇದರೊಡನೆ ಲಗತ್ತಿಸಿರುತೇನೆ. ಈ ಎಲ್ಲಾ ದಾಖಲೆ, ಸಾಕ್ಷ್ಯಾಧಾರಗಳನ್ನು ಪೂರ್ಣವಾಗಿ ಪರಿಶೀಲಿಸದೇ ದೋಷಪೂರಿತ ವರದಿಯನ್ನು ಶಿಸ್ತುಪ್ರಾಧಿಕಾರಕ್ಕೆ ಸಲ್ಲಿಸಿರುತ್ತಾರೆ. ತಮ್ಮ ದಾಖಲೆಗಳನ್ನು ಪರಿಶೀಲಿಸದೇ ಇರುವುದು ಸ್ವಾಭಾವಿಕ ನ್ಯಾಯಕ್ಕೆ ವಿರುದ್ಧವಾಗಿರುತ್ತದೆ.

- ಶಿಸ್ತುಪ್ರಾಧಿಕಾರದ ಆರೋಪದಲ್ಲಿರುವ ಅಂಶಗಳು ಹಾಗೂ ಯೋಜನೆ ಅನುಷ್ಠಾನದಲ್ಲಿನ ಸಮಸ್ಯೆಗಳನ್ನು ಪರಿಶೀಲಿಸದೇ ತಮ್ಮ ಮೇಲೆ ವಿಧಿಸಿರುವ ಗರಿಷ್ಠ ದಂಡನೆಯು ಅಂದರೆ 4 ವಾರ್ಷಿಕ ವೇತನಬಡ್ತಿಗಳನ್ನು ಸಂಚಿತಪರಿಣಾಮಸಹಿತವಾಗಿ ತಡೆಹಿಡಿದಿರುವುದು ಹಾಗೂ ರೂ.1,77,000/- ದುರುಪಯೋಗದ ಮೊತ್ತ ಎಂದು ಪರಿಗಣಿಸಿ ರೂ.9,00000/-ಕ್ಕಿಂತ ಹೆಚ್ಚಿನ ಬಡ್ಡಿ ವಿಧಿಸಿರುವುದು ನಿಯಮಬಾಹಿರವಾಗಿದೆ.
- ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾಗಿ ಗ್ರಾಮ ಪಂಚಾಯಿತಿಯಲ್ಲಿ ಕೆಲಸ ನಿರ್ವಹಿಸುವಾಗ ವಿವಿಧ ಯೋಜನೆಗಳ ಅನುಷ್ಠಾನ, ಮೇಲ್ವಿಚಾರಣೆ, ಮುಂತಾದ ಕ್ರಮಗಳು ಹೆಚ್ಚಿರುತ್ತವೆ. ಇಂತಹ ಸಂದರ್ಭಗಳಲ್ಲಿಯೂ ಸಹ ಹೆಚ್ಚುವರಿ ಪ್ರಭಾರದಲ್ಲಿ ಕೆಲಸ ನಿರ್ವಹಿಸುವಾಗ ಸಣ್ಣಪುಟ್ಟ ಲೋಪಗಳನ್ನು ಗಂಭೀರವಾಗಿ ಪರಿಗಣಿಸಿ ಗರಿಷ್ಠ ಶಿಕ್ಷೆ ವಿಧಿಸುವುದು ನೌಕರರ ಮನೋಸ್ಥೈರ್ಯವನ್ನು ಕುಂದಿಸುತ್ತದೆ. ಆದುದರಿಂದ ಶಿಸ್ತುಪ್ರಾಧಿಕಾರಿಗಳು ವಿಧಿಸಿರುವ ದಂಡನಾದೇಶವನ್ನು ರದ್ದುಗೊಳಿಸುವಂತೆ ಹಾಗೂ ಮೇಲ್ಮನವಿ ವಿಚಾರಣೆಯ ಅಂತ್ಯದ ಆದೇಶದವರೆಗೆ ಶಿಸ್ತು ಪ್ರಾಧಿಕಾರದ ಆದೇಶಕ್ಕೆ ತಡೆಯಾಜ್ಞೆ ನೀಡುವಂತೆ ಪ್ರಾರ್ಥಿಸಿರುತ್ತಾರೆ.

ಈ ಮೇಲ್ಮನವಿಯ ಬಗ್ಗೆ ದಿನಾಂಕ:19.12.2017ರಂದು ವಿಚಾರಣೆ ನಡೆಸಲಾಯಿತು. ಸದರಿ ವಿಚಾರಣೆಗೆ ಜಿಲ್ಲಾ ಪಂಚಾಯಿತಿ ಪರವಾಗಿ ಸಹಾಯಕ ಕಾರ್ಯದರ್ಶಿಗಳಾದ ಶ್ರೀ ಮನೋಜ್‌ಕುಮಾರ್‌ರವರು ಹಾಗೂ ಅರ್ಜಿದಾರರು ಹಾಜರಿದ್ದರು.

ಅರ್ಜಿದಾರರು ತಾವು 2ನೇ ಕಾರಣ ಕೇಳುವ ನೋಟೀಸಿಗೆ ನೀಡಿದ ಉತ್ತರವನ್ನು ಪರಿಗಣಿಸಿರುವುದಿಲ್ಲ, ಅಲ್ಲದೇ ಈ ಮನೆಗಳು ಈಗಾಗಲೇ ಕಟ್ಟಿ ವಾಸಮಾಡುತ್ತಿರುವುದಾಗಿ ಹೇಳಿಕೆ ನೀಡಿರುವ ಕಾರಣ ಅರ್ಜಿದಾರರ ವಿರುದ್ಧದ ಆರೋಪಕ್ಕೆ ಸಂಬಂಧಿಸಿದಂತೆ ಭೌತಿಕವಾಗಿ ಪರಿಶೀಲನೆ ನಡೆಸಿ ಸಾಕ್ಷ್ಯಾಧಾರ ನೀಡುವಂತೆ ಜಿಲ್ಲಾ ಪಂಚಾಯಿತಿ ಅಧಿಕಾರಿಗಳಿಗೆ ಆದೇಶಿಸಲಾಯಿತು. ಅದರಂತೆ ಜಿಲ್ಲಾ ಪಂಚಾಯಿತಿ, ಮೈಸೂರು ರವರು ದಿನಾಂಕ:27/12/2017ರಂದು ವರದಿ ನೀಡಿರುತ್ತಾರೆ.

ಈ ಮೇಲ್ಮನವಿಯ ಬಗ್ಗೆ ದಿನಾಂಕ:05/06/2018ರಂದು ಮತ್ತೊಮ್ಮೆ ವಿಚಾರಣೆ ನಡೆಸಲಾಯಿತು. ಸದರಿ ವಿಚಾರಣೆಗೆ ಜಿಲ್ಲಾ ಪಂಚಾಯಿತಿ ಪರವಾಗಿ ಸಹಾಯಕ ಕಾರ್ಯದರ್ಶಿಗಳಾದ ಶ್ರೀ ಮನೋಜ್‌ಕುಮಾರ್‌ರವರು ಹೆಚ್.ಡಿ.ಕೋಟೆ ತಾಲ್ಲೂಕು ಕಾರ್ಯನಿರ್ವಾಹಕ ಅಧಿಕಾರಿಗಳಾದ ಶ್ರೀ ಶ್ರೀಕಂಠರಾಜೇ ಅರಸ್‌ರವರು ಹಾಗೂ ಅರ್ಜಿದಾರರು ಹಾಜರಿದ್ದರು. ನೌಕರರ ವಿರುದ್ಧ ಆಪಾದನೆಯಲ್ಲಿ ತಿಳಿಸಿರುವ ವಸತಿ ಯೋಜನೆಯ 14 ಮನೆಗಳ ಪೈಕಿ 9 ಮನೆಗಳನ್ನು ನಿರ್ಮಾಣ ಮಾಡಿಕೊಂಡಿರುತ್ತಾರೆ ಹಾಗೂ ಫಲಾನುಭವಿಗಳಿಗೆ ಯೋಜನೆಯ ಅನುದಾನ ಪಾವತಿಯಾಗಿರುತ್ತದೆ ಎಂದು ಸಹಾಯಕ ಕಾರ್ಯದರ್ಶಿಗಳು, ಜಿಲ್ಲಾ ಪಂಚಾಯತ್ ಮೈಸೂರು ರವರು ಹೇಳಿಕೆ ನೀಡಿರುತ್ತಾರೆ.

ಈ ಪ್ರಕರಣಕ್ಕೆ ಸಂಬಂಧಿಸಿದ ಎಲ್ಲಾ ದಾಖಲೆ/ಕಡತಗಳನ್ನು ಪರಿಶೀಲಿಸಲಾಗಿದೆ. ತಮ್ಮ ವಿರುದ್ಧ ಕೆ.ಸಿ.ಎಸ್(ಸಿ.ಸಿ.ಎ)ನಿಯಮಗಳಿಗೆ ವಿರುದ್ಧವಾಗಿ ದಂಡನೆಯನ್ನು ವಿಧಿಸಲಾಗಿದೆ ಎಂದು ಅರ್ಜಿದಾರರು ತಿಳಿಸಿರುತ್ತಾರೆ. ಆದುದರಿಂದ ಸದರಿ ನೌಕರರ ಮೇಲೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ವಿಧಿಸಿರುವ ದಂಡನಾದೇಶವು ಸಮಂಜಸವಲ್ಲವೆಂದು ಸರ್ಕಾರವು ನಿರ್ಣಯಿಸಿದೆ ಹಾಗೂ ಕರ್ನಾಟಕ ನಾಗರೀಕ ಸೇವಾ(ಸಿ.ಸಿ.ಎ)ನಿಯಮಗಳು 1957 ನಿಯಮ 25ರಡಿಯಲ್ಲಿ ಮೇಲ್ಮನವಿಯನ್ನು ಪರಿಗಣಿಸಿದೆ.

ಅದರಂತೆ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/774/ಗ್ರಾಪಂಕಾ/2017</u>**
**<u>ಬೆಂಗಳೂರು, ದಿನಾಂಕ:09-07-2018</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ನಾಗರೀಕ ಸೇವಾ(ಸಿ.ಸಿ.ಎ)ನಿಯಮಗಳು 1957ರ ನಿಯಮ25(2)ರಡಿಯಲ್ಲಿ, ಶ್ರೀ ಹೆಚ್.ಎಸ್‌ಚೆನ್ನಸ್ವಾಮಿ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ (ಗ್ರೇಡ್-1), ಹಿಂದಿನ ಎನ್.ಬೇಗೂರು ಗ್ರಾಮ ಪಂಚಾಯಿತಿ, ಹಾಲಿ ಕಂಚಮಳ್ಳಿ ಗ್ರಾಮಪಂಚಾಯಿತಿ, ಹೆಚ್.ಡಿ.ಕೋಟೆ ತಾಲ್ಲೂಕು, ಮೈಸೂರು ಜಿಲ್ಲೆ ಇವರ ಮೇಲ್ಮನವಿಯನ್ನು ಅಂಗೀಕರಿಸಿದೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಮೈಸೂರು ಜಿಲ್ಲೆರವರ ಆದೇಶ ಸಂಖ್ಯೆ: ಸಿ.ಸಿ.ಎ/01/2014-15, ದಿನಾಂಕ:05-07-2017ರಲ್ಲಿ ವಿಧಿಸಲಾದ ದಂಡನೆಯನ್ನು ಮಾರ್ಪಡಿಸಿದೆ. ಆರೋಪದಲ್ಲಿನ 14 ಮನೆಗಳ ಪೈಕಿ 9 ಮನೆಗಳು ನಿರ್ಮಾಣವಾಗಿದ್ದು, ಫಲಾನುಭವಿಗಳ ಖಾತೆಗೆ ಅನುದಾನದ ಮೊತ್ತ ಪಾವತಿಯಾಗಿರುವುದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ವರದಿಯಲ್ಲಿ ದೃಢಪಟ್ಟಿರುತ್ತದೆ. ಆದುದರಿಂದ ಸದರಿ 9 ಮನೆಗಳ ಮೊಬಲಗನ್ನು ನೌಕರರಿಂದ ವಸೂಲಾತಿಗೆ ಆದೇಶಿಸಿದ್ದ ಮೊಬಲಗಿನಿಂದ ಹೊರತುಪಡಿಸಿ, ಇನ್ನುಳಿದ 5 ಮನೆಗಳಿಗೆ ಸಂಬಂಧಿಸಿದ ಅನುದಾನದ ಮೊಬಲಗನ್ನು ನೌಕರರಿಂದ ವಸೂಲಾತಿ ಮಾಡಲು ಹಾಗೂ ಸದರಿ ನೌಕರರಿಗೆ ವಿಧಿಸಿದ್ದ ನಾಲ್ಕು ವಾರ್ಷಿಕ ವೇತನಬಡ್ತಿಯನ್ನು ಸಂಚಿತ ಪರಿಣಾಮರಹಿತವಾಗಿ ತಡೆಹಿಡಿಯುವಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

10/7/18

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಗಳು:**

1) ಮಹಾಲೇಖಪಾಲರು(ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು ಜಿಲ್ಲೆ.
3) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಹೆಚ್.ಡಿ.ಕೋಟೆ ತಾಲ್ಲೂಕು, ಮೈಸೂರು ಜಿಲ್ಲೆ.
4) ಶ್ರೀ ಹೆಚ್.ಎಸ್.ಚಿನ್ನಸ್ವಾಮಿ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ (ಗ್ರೇಡ್-1), ಹಿಂದಿನ ಎನ್.ಬೇಗೂರು ಗ್ರಾಮ ಪಂಚಾಯಿತಿ, ಹಾಲಿ ಕಂಚಮಳ್ಳಿ ಗ್ರಾಮಪಂಚಾಯಿತಿ, ಹೆಚ್.ಡಿ.ಕೋಟೆ ತಾಲ್ಲೂಕು, ಮೈಸೂರು ಜಿಲ್ಲೆ.
5) ಗಣಕ ಕೋಶ.
6) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.